# Akashvani : Bangalore
# National Bulletin In Kannada
# 09.11.2024 / 19.35 hrs

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**09.11.2024 / 19.35 hrs**

**<><*<><>*><>**

## ಮುಖ್ಯಾಂಶಗಳು

**೧. ಎಂ.ಎಸ್.ಎಂ.ಇ ಗಳಿಗೆ ಸಾರ್ವಜನಿಕ ವಲಯದ ಬ್ಯಾಂಕ್‌ಗಳಿಂದ ೫ ಲಕ್ಷ ಕೋಟಿಗೂ ಅಧಿಕ ಸಾಲ ಸೌಲಭ್ಯದ ಗುರಿ- ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್**

**೨. ಮಹಾರಾಷ್ಟ್ರ, ಜಾರ್ಖಂಡ್ ವಿಧಾನಸಭಾ ಚುನಾವಣೆ: ಪ್ರಧಾನಿ ನರೇಂದ್ರ ಮೋದಿ ಸೇರಿ ವಿವಿಧ ರಾಜಕೀಯ ನೇತಾರರಿಂದ ಬಿರುಸಿನ ಪ್ರಚಾರ**

**೩. ನಾಳೆ ಜಗತ್ತಿನಾದ್ಯಂತ 'ವಿಶ್ವ ರೋಗ ನಿರೋಧಕ ದಿನಾಚರಣೆ'; ಲಸಿಕೆಗಳ ಮಹತ್ವ ಕುರಿತು ಜನಜಾಗೃತಿ**

**೪. ಜಾವೆಲಿನ್‌ಪಟು ನೀರಜ್ ಚೋಪ್ರಾಗೆ ನೂತನ ಕೋಚ್ ಆಗಿ ವಿಶ್ವ ಚಾಂಪಿಯನ್ ಜಾನ್ ಝೆಲೆಜ್ನಿ ನೇಮಕ**

**೫. ಟಿ-೨೦ ಕ್ರಿಕೆಟ್ ಸರಣಿಯ ಮೊದಲ ಪಂದ್ಯದಲ್ಲಿ ಶ್ರೀಲಂಕಾ - ನ್ಯೂಜಿಲೆಂಡ್ ಮುಖಾಮುಖಿ.**

**<><*<><>*><>**

ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆ- ಎಂ.ಎಸ್.ಎಂ.ಇ ಗಳಿಗೆ ಸಾರ್ವಜನಿಕ ವಲಯದ ಬ್ಯಾಂಕ್‌ಗಳು ೫ ಲಕ್ಷ ೭೫ ಸಾವಿರ ಕೋಟಿ ರೂಪಾಯಿಗೂ ಅಧಿಕ ಸಾಲ ಸೌಲಭ್ಯ ನೀಡಬೇಕೆಂಬ ಗುರಿ ನಿಗದಿಪಡಿಸಲಾಗಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ಪ್ರಸಕ್ತ ಹಣಕಾಸು ವರ್ಷದಲ್ಲಿ ಸಾರ್ವಜನಿಕ ವಲಯದ ಬ್ಯಾಂಕ್‌ಗಳು ಎಂ.ಎಸ್.ಎಂ.ಇ ಗಳಿಗೆ ಈ ಪ್ರಮಾಣದಲ್ಲಿ ಸಾಲ ಸೌಲಭ್ಯ ಕಲ್ಪಿಸಬೇಕೆಂದು ಸೂಚಿಸಲಾಗಿದೆ ಎಂದು ತಿಳಿಸಿದರು. ಬೆಂಗಳೂರಿನಲ್ಲಿಂದು ಎಸ್‌ಐಡಿಬಿಐ- ಸಿಡ್ಬಿ ಏರ್ಪಡಿಸಿದ್ದ ರಾಷ್ಟ್ರೀಯ ಎಂ.ಎಸ್.ಎಂ.ಇ ಕ್ಲಸ್ಟರ್ ಔಟ್‌ರೀಚ್ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸಾರ್ವಜನಿಕ ವಲಯದ ಬ್ಯಾಂಕ್‌ಗಳು ಎಂ.ಎಸ್.ಎಂ.ಇ ಗಳ ಬೆಳವಣಿಗೆಗೆ ಕೇವಲ ಶೇಕಡ ೯.೨ ರಷ್ಟು ಸಾಲಸೌಲಭ್ಯ ಕಲ್ಪಿಸುತ್ತಿವೆ. ಆದರೆ, ಖಾಸಗಿ ಬ್ಯಾಂಕ್‌ಗಳು ಶೇಕಡ ೨೫ ರಷ್ಟು ಹಾಗೂ ಎನ್‌ಬಿಎಫ್‌ಸಿ ಗಳು ಶೇಕಡ ೩೯ ರಷ್ಟು ಸಾಲ ಸೌಲಭ್ಯ ನೀಡುತ್ತಿವೆ ಎಂದು ವಿವರಿಸಿದರು. ಇದೇ ಪ್ರಮಾಣದಲ್ಲಿ ಸಾಲಸೌಲಭ್ಯವನ್ನು ಸಾರ್ವಜನಿಕ ವಲಯದ ಬ್ಯಾಂಕಗಳು ಪ್ರಸಕ್ತ ವರ್ಷದಲ್ಲಿ ಎಂ.ಎಸ್.ಎಂ.ಇ ಗಳಿಗೆ ಮುಂದುವರೆಸಿದರೆ, ಈ ಪ್ರಮಾಣ ೪ ಲಕ್ಷ ೨೧ ಸಾವಿರ ಕೋಟಿ ರೂಪಾಯಿಗಳಾಗಲಿದೆ. ದೇಶದಲ್ಲಿ ಅತಿ ಹೆಚ್ಚು ಉದ್ಯೋಗ ಸೃಷ್ಟಿಸುವ ಕೃಷಿ ವಲಯದ ನಂತರದ ಸ್ಥಾನದಲ್ಲಿರುವ ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳಿಗೆ ಹೆಚ್ಚಿನ ಶಕ್ತಿ ತುಂಬಲು ೫ ಲಕ್ಷ ೭೫ ಸಾವಿರ ಕೋಟಿ ರೂಪಾಯಿಗಳ ಸಾಲ ಸೌಲಭ್ಯವನ್ನು ಸಾರ್ವಜನಿಕ ವಲಯದ ಬ್ಯಾಂಕ್‌ಗಳು ವಿಸ್ತರಿಸಬೇಕು ಎಂದು ಅವರು ತಿಳಿಸಿದರು. ಮುಂದಿನ ಹಣಕಾಸು ವರ್ಷದಲ್ಲಿ ಎಂ.ಎಸ್.ಎಂ.ಇ ಗಳಿಗೆ ನೀಡುವ ಸಾಲಸೌಲಭ್ಯದ ಪ್ರಮಾಣವನ್ನು ೬ ಲಕ್ಷ ೧೨ ಸಾವಿರ ಕೋಟಿ ರೂಪಾಯಿಗಳಿಗೆ ಹೆಚ್ಚಿಸಬೇಕು. ಅದಾದ ಬಳಿಕ ೭ ಲಕ್ಷ ಕೋಟಿ ರೂಪಾಯಿಗಳಿಗೆ ವಿಸ್ತರಿಸಬೇಕು ಎಂದು ಅವರು ಹೇಳಿದರು. ಎಂ.ಎಸ್.ಎಂ.ಇ ಗಳಿಗೆ ನೂರು ಕೋಟಿ ರೂಪಾಯಿಗಳ ಸಾಲಸೌಲಭ್ಯ ಕಲ್ಪಿಸುವ ನೂತನ ಸಾಲಸೌಲಭ್ಯ ಖಾತರಿ ಯೋಜನೆಯನ್ನು ಜಾರಿ ಮಾಡುವ ಕುರಿತು ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ ನಿರ್ಧಾರ ಕೈಗೊಳ್ಳಲಾಗುವುದು ಎಂದರು. ಮುದ್ರಾ ಯೋಜನೆಯಡಿ ಈ ಹಿಂದೆ ನೀಡಲಾಗುತ್ತಿದ್ದ ಸಾಲದ ಮೊತ್ತ ೧೦ ಲಕ್ಷ ರೂಪಾಯಿಗಳಿಂದ ೨೦ ಲಕ್ಷ ರೂಪಾಯಿಗಳಿಗೆ ಹೆಚ್ಚಿಸಲಾಗಿದೆ. ಹೊಸ ವಿಭಾಗ 'ತರುಣ್ ಪ್ಲಸ್' ಅಡಿಯಲ್ಲಿ ಸಾಲ ಪಡೆದ ಉದ್ಯಮದಾರರು ಸಾಲ ಮರುಪಾವತಿ ಮಾಡಿದಲ್ಲಿ ಅವರಿಗೆ ೨೦ ಲಕ್ಷ ರೂಪಾಯಿವರೆಗೂ ಸಾಲ ಸೌಲಭ್ಯ ಕಲ್ಪಿಸಲಾಗುವುದು ಎಂದು ಹೇಳಿದರು.

**ಧ್ವನಿ: ನಿರ್ಮಲಾ ಸೀತಾರಾಮನ್**

ಕೇಂದ್ರ ಎಂ.ಎಸ್.ಎಂ.ಇ ಖಾತೆ ಸಚಿವ ಜಿತಿನ್ ರಾಮ್ ಮಾಂಜಿ, ಗಯಾದಿಂದ ವರ್ಚುವಲ್ ಮೂಲಕ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು. ಕೇಂದ್ರ ಹಣಕಾಸು ಖಾತೆ ರಾಜ್ಯ ಸಚಿವ ಪಂಕಜ್ ಚೌಧರಿ, ಕೇಂದ್ ಎಂ.ಎಸ್.ಎಂ,ಇ ಖಾತೆ

ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ, ಹಿರಿಯ ಬ್ಯಾಂಕ್ ಅಧಿಕರಿಗಳು, ಕೈಗಾರಿಕಾ ಒಕ್ಕೂಟಗಳ ಪ್ರತಿನಿಧಿಗಳು ಹಾಗೂ ಉದ್ಯಮದಾರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

<><*<><>*><>

ಮಹಾರಾಷ್ಟ್ರ ವಿಧಾನಸಭಾ ಚುನಾವಣಾ ಪ್ರಚಾರ ಅಖಾಡ ದಿನೇ ದಿನೇ ರಂಗೇರುತ್ತಿದೆ. ಬಿಜೆಪಿ, ಕಾಂಗ್ರೆಸ್ ನೇತೃತ್ವದ ಇಂಡಿ ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳ ಪ್ರಮುಖರು ತಮ್ಮ ತಮ್ಮ ಅಭ್ಯರ್ಥಿಗಳ ಪರವಾಗಿ ಮತಯಾಚನೆಯಲ್ಲಿ ತೊಡಗಿದ್ದಾರೆ. ಬಿಜೆಪಿಯ ಹಿರಿಯ ನಾಯಕ, ಪ್ರಧಾನಿ ನರೇಂದ್ರ ಮೋದಿ, ವಿದರ್ಭ ವಿಭಾಗದ ಅಕೋಲಾದಲ್ಲಿ ಮೊದಲ ಚುನಾವಣಾ ರ್‍ಯಾಲಿಯನ್ನುದ್ದೇಶಿಸಿ ಅಮರಾವತಿಯಲ್ಲಿ ಜವಳಿ ಪಾರ್ಕ್ ನಿರ್ಮಾಣಕ್ಕೆ ಅಡಿಗಲ್ಲು ಹಾಕುವ ಮೂಲಕ ಹತ್ತಿ ಬೆಳೆಗಾರರಿಗೆ ಅಗತ್ಯವಿರುವ ಮೂಲಸೌಕರ್ಯ ಅಭಿವೃದ್ಧಿ ಮತ್ತು ಜವಳಿ ಉದ್ಯಮದ ಪ್ರಗತಿಗೆ ಕ್ರಮ ಕೈಗೊಳ್ಳಲಾಗಿದೆ ಎಂದರು. ಜವಳಿ ಪಾರ್ಕ್‌ನಿಂದ ಹತ್ತಿ ಬೆಳೆಗಾರರ ಪ್ರಗತಿಗೆ ದಾರಿ ಮಾಡಿಕೊಡಲಾಗಿದೆ. ಮೂರನೇ ಬಾರಿಗೆ ಕೇಂದ್ರದಲ್ಲಿ ತಮ್ಮ ನೇತೃತ್ವದ ಸರ್ಕಾರ ರಚನೆಯಾದ ನಂತರ ಮಹಾರಾಷ್ಟ್ರದಲ್ಲಿ ಮೂಲ ಸೌಕರ್ಯ ಅಭಿವೃದ್ಧಿ ಯೋಜನೆಗಳು ಸೇರಿದಂತೆ ಕೋಟ್ಯಂತರ ರೂಪಾಯಿಗಳ ಹಲವಾರು ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಲಾಗಿದೆ ಎಂದರು. ವಿದರ್ಭದಲ್ಲಿ ನೀರಾವರಿ ಯೋಜನೆಗಳ ಪ್ರಾಮುಖ್ಯತೆಯನ್ನು ವಿವರಿಸಿದ ಅವರು, ದೇವೇಂದ್ರ ಫಡ್ನವೀಸ್ ನೇತೃತ್ವದ ಸರ್ಕಾರ ಜಾರಿಗೆ ತಂದಿದ್ದ ಹಲವಾರು ನೀರಾವರಿ ಯೋಜನೆಗಳನ್ನು ಮಹಾ ವಿಕಾಸ್ ಅಘಾಡಿ ಸರ್ಕಾರ ಸ್ಥಗಿತಗೊಳಿಸಿದೆ ಎಂದು ಆರೋಪಿಸಿದರು. ತಮ್ಮ ಸರ್ಕಾರ ಮರಾಠಿ ಭಾಷೆಗೆ ಶಾಸ್ತ್ರೀಯ ಸ್ಥಾನಮಾನ ಘೋಷಿಸುವ ಮೂಲಕ ಮಹಾರಾಷ್ಟ್ರದ ಪ್ರತಿಷ್ಠೆಯನ್ನು ಉತ್ತುಂಗಕ್ಕೇರಿಸಿದೆ ಎಂದರು. ಬಳಿಕ ನಾಂದೇಡ್‌ನಲ್ಲಿ ಚುನಾವಣಾ ರ್‍ಯಾಲಿಯಲ್ಲಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ರಾಜ್ಯದಲ್ಲಿನ ಮಹಾಯುತಿ ಸರ್ಕಾರ ಮರಾಠ್‌ವಾಡ ವಲಯದ ಅಭಿವೃದ್ಧಿಗೆ ನಿರಂತರವಾಗಿ ಶ್ರಮಿಸುತ್ತಿದೆ. ಕಳೆದ ಎರಡೂವರೆ ವರ್ಷಗಳಲ್ಲಿ ಈ ವಲಯದಲ್ಲಿ ೮೦ ಸಾವಿರ ಕೋಟಿಗೂ ಅಧಿಕ ಬಂಡವಾಳ ಹೂಡಲಾಗಿದೆ ಎಂದು ತಿಳಿಸಿದರು. ಈ ನಡುವೆ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಅಮರಾವತಿ ಮತ್ತು ನಾಗ್ಪುರ ಉತ್ತರ ವಿಧಾನಸಭಾ ಕ್ಷೇತ್ರಗಳಲ್ಲಿ ಪ್ರಚಾರ ಸಭೆಗಳಲ್ಲಿ ಭಾಗವಹಿಸಿ ಮತಯಾಚನೆ ಮಾಡಿದರು. ಇದಕ್ಕೂ ಮುನ್ನ ನಾಗ್ಪುರದಲ್ಲಿನ ದೀಕ್ಷಾ ಭೂಮಿಗೆ ಭೇಟಿ ನೀಡಿ, ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರಿಗೆ ಗೌರವ ನಮನ ಸಲ್ಲಿಸಿದರು.

<><*<><>*><>

ಜಾರ್ಖಂಡ್ ವಿಧಾನಸಭಾ ಚುನಾವಣಾ ಪ್ರಚಾರ ಬಿರುಸುಗೊಂಡಿದೆ. ಎನ್‌ಡಿಎ ಮತ್ತು ಇಂಡಿ ಮೈತ್ರಿಕೂಟದ ನಾಯಕರು ತಮ್ಮ ತಮ್ಮ ಅಭ್ಯರ್ಥಿಗಳ ಪರವಾಗಿ ವ್ಯಾಪಕ ಪ್ರಚಾರ ನಡೆಸುವುದರ ಮೂಲಕ ಮತಯಾಚನೆ ಮಾಡಿದರು. ಪಲಮುವಿನ ಛಾತರ್‌ಪುರ್‌ನಲ್ಲಿ ಏರ್ಪಡಿಸಿದ್ದ ಚುನಾವಣಾ ಪ್ರಚಾರ ಸಭೆಯಲ್ಲಿ ಮಾತನಾಡಿದ ಬಿಜೆಪಿ ಹಿರಿಯ ನಾಯಕ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ, ಕಾಂಗ್ರೆಸ್ ಮುಖಂಡ ರಾಹುಲ್ ಗಾಂಧಿ ಅವರು, ಒಬಿಸಿ, ದಲಿತರು, ಬುಡಕಟ್ಟು ಸಮುದಾಯಗಳ ವಿರುದ್ಧವಾಗಿದ್ದಾರೆ ಎಂದು ಆರೋಪಿಸಿದರು. ಈ ಮಧ್ಯೆ ಪಲಮುವಿನ ವಿಶ್ರಾಮ್‌ಪುರ್‌ದಲ್ಲಿ ಸಾರ್ವಜನಿಕ ರ್‍ಯಾಲಿಯಲ್ಲಿ ಮಾತನಾಡಿದ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ, ರಾಜ್ಯದ ಮುಖ್ಯಮಂತ್ರಿ ಹೇಮಂತ್ ಸೊರೆನ್, ಜನರಿಗೆ ಸುಳ್ಳು ಭರವಸೆಗಳನ್ನು ನೀಡುವ ಮೂಲಕ ವಂಚನೆ ಮಾಡುತ್ತಿದ್ದಾರೆ ಎಂದು ಟೀಕಿಸಿದರು. ಧನ್‌ಬಾದ್ ಜಿಲ್ಲೆಯ ಬಾಘ್‌ಮಾರದಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಬಿಜೆಪಿಯ ತೆರಿಗೆ ನೀತಿಗಳನ್ನು ಟೀಕಿಸಿ, ಆ ಪಕ್ಷದ ನಾಯಕರು ಶ್ರೀಮಂತರ ಪರವಾಗಿದ್ದಾರೆ ಎಂದು ಆರೋಪಿಸಿದರು. ದೇಶದ ಒಟ್ಟು ಜನಸಂಖ್ಯೆಯಲ್ಲಿ ಪರಿಶಿಷ್ಟ ಸಮುದಾಯಗಳು ಮತ್ತು ಇತರೆ ಹಿಂದುಳಿದ ವರ್ಗಗಳ ಜನರ ಪಾಲು ಹೆಚ್ಚಾಗಿದ್ದು, ಆ ಜನಸಂಖ್ಯೆ ಅನುಗುಣವಾಗಿ ಸರ್ಕಾರಿ ಸಂಸ್ಥೆಗಳಲ್ಲಿ ಸೂಕ್ತ ಪ್ರಾತಿನಿಧ್ಯ ನೀಡಿಲ್ಲ ಎಂದು ದೂರಿದರು. ಮತ್ತೊಂದೆಡೆ ಜಾರ್ಖಂಡ್ ಮುಖ್ಯಮಂತ್ರಿ ಹೇಮಂತ್ ಸೊರೇನ್, ಬಿಜೆಪಿ ನಾಯಕರ ಧೋರಣೆಯನ್ನು ಟೀಕಿಸಿದರು. ರಾಂಚಿಯಲ್ಲಿ ಏರ್ಪಡಿಸಿದ್ದ ಚುನಾವಣಾ ರ್‍ಯಾಲಿಯಲ್ಲಿ ಮಾತನಾಡಿದ ಅವರು, ತಮ್ಮ ಅಧಿಕಾರವಧಿಯಲ್ಲಿ  ಬಾಂಗ್ಲಾದೇಶದಿಂದ ಅಕ್ರಮವಾಗಿ ಜಾರ್ಖಂಡ್‌ಗೆ ನುಸುಳುವಿಕೆ ಹೆಚ್ಚಾಗಿದೆ ಎಂಬ ಬಿಜೆಪಿ ನಾಯಕರ ಆರೋಪವನ್ನು ತಳ್ಳಿ ಹಾಕಿದರು. ಈ ಮಧ್ಯೆ ಆರ್‌ಜೆಡಿ, ಎಜೆಎಸ್‌ಯು ಮತ್ತು ಎಡಪಕ್ಷಗಳ ಮುಖಂಡರು ರಾಜ್ಯದ ವಿವಿಧ ಭಾಗಗಳಲ್ಲಿ ಚುನಾವಣಾ ರ್‍ಯಾಲಿಗಳಲ್ಲಿ ಭಾಗವಹಿಸಿ ತಮ್ಮ ಅಭ್ಯರ್ಥಿಗಳ ಪರ ಮತಯಾಚನೆ ಮಾಡಿದರು. ೮೧ ಸದಸ್ಯ ಬಲದ ಜಾರ್ಖಂಡ್ ವಿಧಾನಸಭೆಗೆ ಇದೇ ೧೩ ಮತ್ತು ೨೦ ರಂದು ಎರಡು ಹಂತಗಳಲ್ಲಿ ಚುನಾವಣೆ ನಡೆಯಲಿದೆ. ಇದೇ ೨೩ ರಂದು ಮತ ಎಣಿಕೆ ನಡೆಯಲಿದೆ.

<><*<><>*><>

ಭಾರತವನ್ನು ಅಭಿವೃದ್ಧಿ ರಾಷ್ಟ್ರವನ್ನಾಗಿ ಮಾರ್ಪಡಿಸುವಲ್ಲಿ ಸಂಶೋಧನೆ ಮತ್ತು ಅನ್ವೇಷಣೆ ಪ್ರಮುಖ ಪಾತ್ರ ವಹಿಸಲಿವೆ ಎಂದು ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಹೇಳಿದ್ದಾರೆ. ನವದೆಹಲಿಯಲ್ಲಿಂದು ರಾಷ್ಟ್ರೀಯ ತಂತ್ರಜ್ಞಾನ ಸಂಸ್ಥೆಯ ನಾಲ್ಕನೇ ಘಟಿಕೋತ್ಸವದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಂಶೋಧನೆಗೆ ಹೆಚ್ಚಿನ ಬಲ ತುಂಬಲು ಕೈಗಾರಿಕೆ, ವಾಣಿಜ್ಯ, ವ್ಯಾಪರ ವಲಯದಲ್ಲಿನ ಸಂಸ್ಥೆಗಳು ಮುಂದಾಗಬೇಕು. ಅದೇ ರೀತಿ ಅನ್ವೇಷಣೆಗೂ ಉದಾರ ಆರ್ಥಿಕ ನೆರವು ನೀಡಬೇಕು ಎಂದು ಕರೆ ನೀಡಿದರು.

<><*<><>*><>

’ವಿಶ್ವ ರೋಗನಿರೋಧಕ ದಿನ’ವನ್ನಾಗಿ ನಾಳೆ ಜಗತ್ತಿನಾದ್ಯಂತ ಆಚರಣೆ ಮಾಡಲಾಗುವುದು. ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟುವುದು ಮತ್ತು ಸಾರ್ವಜನಿಕ ಆರೋಗ್ಯವನ್ನು ಕಾಪಾಡಿಕೊಂಡು ಬರುವಲ್ಲಿ ಲಸಿಕೆಗಳ ಪಾತ್ರ ಕುರಿತು ಜಾಗೃತಿ ಮೂಡಿಸುವುದು ಈ ದಿನದ ಪ್ರಮುಖ ಉದ್ದೇಶವಾಗಿದೆ. ಜೀವರಕ್ಷಕ ಲಸಿಕೆಗಳನ್ನು ಪ್ರತಿಯೊಬ್ಬ ವ್ಯಕ್ತಿ ಪಡೆದುಕೊಳ್ಳಬೇಕು ಎಂಬುದರ ಮಹತ್ವವನ್ನು ತಿಳಿಸುವುದು ಈ ದಿನದ ಗುರಿಯಾಗಿದೆ. ರೋಗ ನಿರೋಧಕ ಲಸಿಕೆಗಳನ್ನು ನೀಡುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಭಾರತದಲ್ಲಿ ಪೋಲಿಯೊ, ತಾಯಿ ಮತ್ತು ನವಜಾತ ಶಿಶುವಿಗೆ ಬಾಧಿಸುವ ಧನುರ್ವಾಯು ಸೇರಿದಂತೆ ಮಾರಾಣಾಂತಿಕ ಕಾಯಿಲೆಗಳನ್ನು ನಿರ್ಮೂಲನೆ ಮಾಡುವಲ್ಲಿ ಮಹತ್ವದ ಸಾಧನೆ ಮಾಡಲಾಗಿದೆ. ೨೦೨೩-೨೪ನೇ ಹಣಕಾಸು ವರ್ಷದಲ್ಲಿ ದೇಶದಲ್ಲಿ ಸಂಪೂರ್ಣ ರೋಗ ನಿರೋಧಕ ವ್ಯಾಪ್ತಿ ಪ್ರಮಾಣ ಶೇಕಡ ೯೨.೨೩ ಕ್ಕೆ ತಲುಪಿದೆ.

<><*<><>*><>

ಭಾರತದ ಚಿನ್ನದ ಹುಡುಗ ಜಾವೆಲಿನ್‌ಪಟು ನೀರಜ್ ಚೋಪ್ರಾ ಅವರಿಗೆ ಮೂರು ಬಾರಿಯ ಒಲಿಂಪಿಕ್ ಮತ್ತು ವಿಶ್ವ ಚಾಂಪಿಯನ್ ಜಾನ್ ಝೆಲೆಜ್ನಿ ನೂತನ ಕೋಚ್ ಆಗಿದ್ದಾರೆ. ಬಳಿಕ ಮಾತನಾಡಿದ ನೀರಜ್ ಚೋಪ್ರಾ, ಝೆಲೆಜ್ನಿ ಎಸೆಯುವ ಶೈಲಿ ಹಾಗೂ ಅವರ ಜ್ಞಾನಕ್ಕೆ ಯಾರ ಸಾಟಿಯೂ ಇಲ್ಲ. ಅವರ ನಿರ್ದೇಶನದಲ್ಲಿ ತರಬೇತಿ ಪಡೆಯುವುದು ಅಮೂಲ್ಯ ಕ್ಷಣ ಎಂದು ಹೇಳಿದ್ದಾರೆ. ಜಾನ್ ಝೆಲೆಜ್ನಿ ಕ್ರಮವಾಗಿ ೧೯೯೨, ೧೯೯೬ ಮತ್ತು ೨೦೦೦ ರ ಒಲಂಪಿಕ್ ಕ್ರೀಡಾಕೂಟಗಳಲ್ಲಿ ಚಿನ್ನದ ಪದಕ ವಿಜೇತರಾಗಿದ್ದಾರೆ. ಜಾನ್ ಝೆಲೆಜ್ನಿ ಮೂರು ಬಾರಿ ಒಲಿಂಪಿಕ್ ಮತ್ತು ವಿಶ್ವ ಚಾಂಪಿಯನ್ ಆಗಿದ್ದು, ಅತೀ ದೂರ ಜಾವೆಲಿನ್ ಎಸೆದ ವಿಶ್ವ ದಾಖಲೆಯೂ ಝೆಲೆಜ್ನಿ ಹೆಸರಿನಲ್ಲಿದೆ. ಜಾನ್ ಝೆಲೆಜ್ನಿ ೧೯೯೬ ರಲ್ಲಿ ಜರ್ಮನಿಯಲ್ಲಿ ನಡೆದ ಒಲಿಂಪಿಕ್ಸ್ ಕ್ರೀಡಾಕೂಟದಲ್ಲಿ ಬರೋಬ್ಬರಿ ೯೮.೪೮ ಮೀಟರ್ ದೂರ ಜಾವೆಲಿನ್ ಎಸೆಯುವ ಮೂಲಕ ವಿಶ್ವದಾಖಲೆ ಸೃಷ್ಟಿಸಿದ್ದರು. ಈವರೆಗೂ ಈ ದಾಖಲೆಯನ್ನು ಮುರಿಯಲು ಯಾರಿಂದಲೂ ಸಾಧ್ಯವಾಗಿಲ್ಲ.

<><*<><>*><>

ಶ್ರೀಲಂಕಾ ಮತ್ತು ನ್ಯೂಜಿಲೆಂಡ್ ನಡುವಿನ ಎರಡು ಟಿ-೨೦ ಸರಣಿ ಪಂದ್ಯಗಳ ಪೈಕಿ ಮೊದಲ ಪಂದ್ಯ ಶ್ರೀಲಂಕಾದ ರಂಗಿರಿ ದಂಬುಲ್ಲಾ ಅಂತರಾಷ್ಟ್ರೀಯ ಕ್ರೀಡಾಂಗಣದಲ್ಲಿ ಈಗ ನಡೆಯುತ್ತಿದೆ. ಟಾಸ್ ಗೆದ್ದ ನ್ಯೂಜಿಲೆಂಡ್ ತಂಡ ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿದೆ. ಇತ್ತೀಚಿನ ವರದಿ ಬಂದಾಗ ನ್ಯೂಜಿಲೆಂಡ್ ೮.೧ ಓವರಗಳಲ್ಲಿ ೩ ವಿಕೆಟ್ ನಷ್ಟಕ್ಕೆ ೪೭ ರನ್ ಗಳಿಸಿ ಆಡುತ್ತಿದೆ. ಉಭಯ ತಂಡಗಳು ಎರಡು ಟಿ-೨೦ ಅಂತಾರಾಷ್ಟ್ರೀಯ ಸರಣಿ ಪಂದ್ಯಗಳಲ್ಲಿ ಮುಖಾಮುಖಿಯಾಗಲಿದ್ದು, ಮೂರು ಏಕದಿನ ಅಂತಾರಾಷ್ಟ್ರೀಯ ಪಂದ್ಯಗಳಲ್ಲಿ ಆಡಲಿವೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**